ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಹೌದು.

ಆ) ಪ್ರತಿ ವರ್ಷವೂ, ನಗರ ಪ್ರದೇಶಗಳಲ್ಲಿ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳಾದ ಕೊಠಡಿ ನಿರ್ಮಾಣಗಳನ್ನು ಕೈಗೊಳ್ಳಲು ಪ್ರತ್ಯೇಕ ಅನುದಾನವನ್ನು ಬಿಡುಗಡೆ ಮಾಡುತ್ತಾ ಬಂದಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ. 2002-03ನೇ ಸಾಲಿನಲ್ಲಿ ನಗರ ಪ್ರದೇಶದಲ್ಲಿ ಸರ್ಕಾರಿ ಪ್ರಾಥಮಿಕ ಶಾಲಾ ಕೊಠಡಿಗಳನ್ನು ನಿರ್ಮಾಣ ಮಾಡಲು ರೂ. 350.00 ಲಕ್ಷಗಳ ಅನುದಾನವನ್ನು ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಲಾಗಿದೆ.

ಮಂಡ್ಯ ನಗರದಲ್ಲಿನ ಆಯುರ್ವೇದ ಆಸ್ಪತ್ರೆಗೆ ಕಟ್ಟಡ ನಿರ್ಮಾಣ

214 (123) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) -ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಂಡ್ಯ ನಗರದ ಜಿಲ್ಲಾ ಆಯುರ್ವೇದ ಆಸ್ಪತ್ರೆಗೆ ಕಟ್ಟಡದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಆಸ್ಪತ್ರೆಗೆ ಸ್ವಂತ ಕಟ್ಟಡದ ಸೌಲಭ್ಯ ಒದಗಿಸಲು ಸರ್ಕಾರವು ಈವರೆವಿಗೆ ಕೈಗೊಂಡಿರುವ ಕ್ರಮಗಳೇನು?

ಶ್ರೀಮತಿ ನಫೀಸ್ ಫಜಲ್ (ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು)

ಅ) ಹೌದು.

ಆ) ಸದರಿ ಆಸ್ಪತ್ರೆಗೆ ಸ್ವಂತ ಕಟ್ಟಡ ಇಲ್ಲದ ಪ್ರಯುಕ್ತ ಇದನ್ನು ನಿರ್ಮಾಣ ಮಾಡಲು ಮಂಡ್ಯದ ಜಿಲ್ಲಾಧಿಕಾರಿಗಳು, ಮಂಡ್ಯ ಗ್ರಾಮ, ಸರ್ವೆ ನಂ. 77 ರಲ್ಲಿರುವ 15 ಗುಂಟೆ ಜಮೀನನ್ನು ಮಂಜೂರು ಮಾಡಿರುತ್ತಾರೆ. ಆ ಜಮೀನಿನಲ್ಲಿ ಆಯುರ್ವೇದ ಆಸ್ಪತ್ರೆ ಕಟ್ಟಡ ಕಟ್ಟುವ ಬಗ್ಗೆ ಲೋಕೋಪಯೋಗಿ ಇಲಾಖೆಯ ರೂ. 65.00 ಲಕ್ಷಗಳ ಅಂದಾಜು ಪಟ್ಟಿ ಮತ್ತು ನಕ್ಷೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಹಾಗೂ ಪ್ರಸಕ್ತ 2002-2003 ನೇ ಸಾಲಿನಲ್ಲಿ ಈ ಕಾಮಗಾರಿಗೆ ರೂ. 16.00 ಲಕ್ಷ ಆಯವ್ಯಯ ಬಿಡುಗಡೆ ಮಾಡಿದೆ. ಈ ಕಟ್ಟಡ ನಿರ್ಮಾಣ ಕಾರ್ಯವನ್ನು ಲೋಕೋಪಯೋಗಿ ಇಲಾಖೆ, ಮಂಡ್ಯ ಇವರಿಗೆ ವಹಿಸಲಾಗಿದೆ.

ಮಂಡ್ಯ ಜಿಲ್ಲೆಯಲ್ಲಿ ಸ್ವ ಜಲಧಾರ ಯೋಜನೆ ಅನುಷ್ಠಾನ

215 (126) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) - ಮಾನ್ಯ ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) "ಸ್ವ ಜಲಧಾರ" ಕುಡಿಯುವ ನೀರಿನ ಯೋಜನೆಯನ್ನು, ಸರ್ಕಾರವು ಅನುಷ್ಠಾನಗೊಳಿಸುತ್ತಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯ ವಿವರಗಳೇನು ;

ಇ) ಸರ್ಕಾರವು ಮಂಡ್ಯ ಜಿಲ್ಲೆಯಲ್ಲಿನ ಕುಡಿಯುವ ನೀರಿನ ಪ್ರಸಕ್ತ ಪರಿಸ್ಥಿತಿಯ ಅಧ್ಯಯನ ಮಾಡಿ ಮಾಹಿತಿ ಪಡೆದಿದೆಯೇ ;